ಶ್ರೀ ಧರ್ಮಸಿಂಗ್ ಲೋಕೋಪಯೋಗಿ ಸಚಿವರು) :—

1. ಹಾಸನ ಜಿಲ್ಲೆಯ ವಿಶ್ವವಿಖ್ಯಾತ ಐತಿಹಾಸಿಕ ಪ್ರವಾಸೋದ್ಯಮಗಳಾದ ಬೇಲೂರು, ಹಳೇಬೀಡು, ಹಳೇಬೀಡು-ಹಗರೆ ಮತ್ತು ಹಾಸನ-ಹಗರೆ-ಬೇಲೂರು ಸೇರುವ ರಸ್ತೆಗಳ ಅಭಿವೃದ್ಧಿ ಕೆಲಸಕ್ಕೆ ರೂ. 7.50 ಲಕ್ಷಗಳಿಗೆ ವಿವರವಾದ ಅಂದಾಜನ್ನು ತಯಾರಿಸಲಾಗಿದೆ. ಈ ಕಾಮಗಾರಿಯ ಅಭಿವೃದ್ಧಿ ಕೆಲಸಗಳನ್ನು ಹಣದ ಲಭ್ಯತೆಯನ್ನು ಆಧರಿಸಿ ಆದ್ಯತೆಯ ಮೇರೆಗೆ ಕೈಗೊಳ್ಳಲಾಗುವುದು.

ಹೋಬಳಿ ಮಟ್ಟದಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡುವ ಬಗ್ಗೆ.

2262 (೨೬೯೨) ಶ್ರೀ ಎನ್.ಎಚ್ ಪುಟ್ಟರಂಗನಾಥ್ (ಬೇಲೂರು) :— ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹೋಬಳಿ ಮಟ್ಟದಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ?

ಆ) ಹಾಗಿದ್ದಲ್ಲಿ ಕೈಗೊಂಡಿರುವ ಕ್ರಮವೇನು?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು) :—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳು.

2264(2750) ಶ್ರೀ ರಾಜು ಗೌಡ ಕೆ. (ಹನ್ನೂರು) :— ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿ ಎಷ್ಟು ನಿಗಮಗಳು ಇವೆ.

ಆ) ಅವುಗಳು ಯಾವುವು; ಹಾಗೂ ಎಂದಿನಿಂದ ಅಸ್ತಿತ್ವಕ್ಕೆ ಬಂದಿದೆ;

ಇ) ಇವುಗಳಿಗಾಗಿ ಅರಣ್ಯ ಇಲಾಖೆಯಿಂದ ಹೂಡಿರುವ ಬಂಡವಾಳ ಎಷ್ಟು?

ಈ) ಇವುಗಳಿಂದ ಎಷ್ಟು ಜನರಿಗೆ ಉದ್ಯೋಗ ಒದಗಿಸಲಾಗಿದೆ; ಅವುಗಳಿಂದ ಎಷ್ಟು ರೂ. ಲಾಭ ಬಂದಿದೆ.